## ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಮೂಡಿಗೆರೆ

## ಸಿ.ಸಿ.ಸಂಖ್ಯೆ :1717/2024

ಪಿರ್ಯಾದಿ : ರಾಜ್ಯ, ಪರವಾಗಿ ಮೂಡಿಗೆರೆ ಪೊಲೀಸ್ ಠಾಣೆ,

ವಿರುದ್ಧ

ಆರೋಪಿ : ಮಹಮದ್ ಫಯಾಜ್ ಎ.ಎಸ್.,
ವಯಸ್ಸು ಸುಮಾರು 26 ವರ್ಷ,
ಬಿನ್ ಸುಲೇಮಾನ್,
ವೃತ್ತಿಃ ಲಾರಿ ಚಾಲಕ,
ವಾಸಃ ಕೃಷ್ಣಾಪುರ ಗ್ರಾಮ, ಮೂಡಿಗೆರೆ ತಾಲ್ಲೂಕು,
ಚಿಕ್ಕಮಗಳೂರು ಜಿಲ್ಲೆ.

### ಆಪಾದನೆಯ ಸಾರಾಂಶ.

ಶ್ರೀ. ವಿಶ್ವನಾಥ್ ಎ., ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಮೂಡಿಗೆರೆ, ಆದ ನಾನು, ಆರೋಪಿಯಾದ ನಿಮ್ಮ ಮೇಲೆ ಮಾಡುವ ಆಪಾದನೆ ಏನೆಂದರೆಃ-

ದಿನಾಂಕಃ 03.04.2024 ರಂದು ಮಧ್ಯಾಹ್ನ 04-45 ರ ಸಮಯದಲ್ಲಿ ಮೂಡಿಗೆರೆ ಪೊಲೀಸ್ ಠಾಣಾ ವ್ಯಾಪ್ತಿಯ ಮೂಡಿಗೆರೆ ತಾಲ್ಲೂಕು ಮುತ್ತಿಗೆಪುರ ಗ್ರಾಮದ ಬಳಿ ಇರುವ ಹರೀಶ್ ಪಿ.ಯು.ಕಾಲೇಜು ಮುಂದೆ ಮೂಡಿಗೆರೆ ಕಡೆಯಿಂದ ಸಕಲೇಶಪುರ ಕಡೆಗೆ ಹಾದು ಹೋಗಿರುವ ಟಾರು ರಸ್ತೆಯಲ್ಲಿ ಚಾಸಾ-1 ಸುರೇಶ್ ವಿಠಲ್ ಗಡ್ಡಿ ರವರು ಮೂಡಿಗೆರೆ ಕಡೆಯಿಂದ ಸಕಲೇಶಪುರ ಕಡೆಗೆ ಕೆಎ-18-ಎಫ್-654 ರ ಕೆ.ಎಸ್.ಆರ್.ಟಿ.ಸಿ. ಬಸ್ ನ್ನು ಚಾಲನೆ ಮಾಡಿಕೊಂಡು ಹೋಗುತ್ತಿರುವಾಗ ಆರೋಪಿಯಾದ ನೀವು ನಿಮ್ಮ ಬಾಬ್ತು ವಾಹನ ನೋಂದಣಿ ಸಂಖ್ಯೆಃಕೆಎ-18-ಡಿ-7272 ಈಚರ್ ಲಾರಿ ಯನ್ನು ವೇಗವಾಗಿ ಅಜಾಗರೂಕತೆಯಿಂದ ಮಾನವ ಪ್ರಾಣಕ್ಕೆ ಅಪಾಯಕರ ರೀತಿಯಲ್ಲಿ ಚಲಾಯಿಸಿರುತ್ತೀರಿ. ಈ ರೀತ್ಯಾ ಆರೋಪಿಯಾದ ನೀವು ಭಾರತ ದಂಡ ಸಂಹಿತೆ ಕಲಂ **279** ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಮಾಡಿರುವಿರಿ ಎಂದು ಆಪಾದಿಸಲಾಗಿದೆ?

**2.** ಮೇಲೆ ಹೇಳಿದ ದಿನಾಂಕ, ಸ್ಥಳ ಮತ್ತು ಸಮಯದಲ್ಲಿ ಆರೋಪಿಯಾದ ನೀವು ಸದರಿ ವಾಹನವನ್ನು ವೇಗವಾಗಿ ತುಂಬಾ ಅಜಾಗರೂಕತೆಯಿಂದ ಅಪಾಯಕರ ರೀತಿಯಲ್ಲಿ ಚಾಲನೆ ಮಾಡಿಕೊಂಡು ಕೆ.ಎಸ್.ಆರ್.ಟಿ.ಸಿ. ಬಸ್ ನ ಬಲಭಾಗದ ಹಿಂಬದಿಯ ಬಾಡಿಗೆ ಡಿಕ್ಕಿ ಹೊಡೆಸಿದ ಪರಿಣಾಮ, ಬಸ್ಸಿನ ಬಲಭಾಗದ ಹಿಂಬದಿಯ ಬಾಡಿ ಜಖಂಗೊಂಡು, ಬಸ್ಸಿನ ಹಿಂಬದಿಯ ಕಿಟಕಿ ಗಾಜು ಒಡೆದು ಹೋಗಿದ್ದು, ಬಸ್ಸಿನ ಬಲಭಾಗದ ಹಿಂದಿನ ಸೀಟಿನಲ್ಲಿ ಕಿಟಕಿ ಪಕ್ಕದಲ್ಲಿ ಕುಳಿತಿದ್ದ ಚಾಸಾ-5 ಐಯ್ಯಪ್ಪ ಇವರ ತಮ್ಮನಾದ 17

ವರ್ಷ ಪ್ರಾಯದ ರಜೀತ್ ಹಣೆಗೆ, ಮುಖಕ್ಕೆ, ಗಲ್ಲಕ್ಕೆ ಮತ್ತು ಬಲ ಕೈ ಭುಜಕ್ಕೆ ತೀವ್ರ ಸ್ವರೂಪದ ಗಾಯಗಳಾಗಿದ್ದು, ಅವರನ್ನು ಮೂಡಿಗೆರೆ ಸರ್ಕಾರಿ ಆಸ್ಪತ್ರೆಗೆ ದಾಖಲಿಸಿ ನಂತರ ಹೆಚ್ಚಿನ ಚಿಕಿತ್ಸೆಗಾಗಿ ಅದೇ ದಿವಸ ಮಂಗಳೂರು ವೆಲ್ ಲಾಕ್ ಜಿಲ್ಲಾ ಸರ್ಕಾರಿ ಆಸ್ಪತ್ರೆಗೆ ದಾಖಲಿಸಿದ್ದು, ಚಿಕಿತ್ಸೆ ಫಲಿಸದೆ ಅದೇ ದಿನ ರಾತ್ರಿ 9-45 ರ ಸಮಯದಲ್ಲಿ ಮೃತಪಟ್ಟಿರುತ್ತಾರೆ. ಈ ರೀತ್ಯಾ ಆರೋಪಿಯಾದ ನೀವು ಭಾರತ ದಂಡ ಸಂಹಿತೆ ಕಲಂ 304(ಎ) ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಮಾಡಿರುವಿರಿ ಎಂದು ಆಪಾದಿಸಲಾಗಿದೆ?

ಪ್ರಃ 1. ಈಗ ಮೇಲೆ ಓದಿ ಹೇಳಿದ ಆಪಾದನೆಯನ್ನು ಕೇಳಿದ್ದೀರಾ? ಅದು ನಿಮಗೆ ಅರ್ಥವಾಯಿತೇ?

ಆರೋಪಿಯ ಉತ್ತರಃ

ಪ್ರಃ 2. ನೀವು ಆಪಾದನೆಯನ್ನು ಒಪ್ಪಿಕೊಳ್ಳುವಿರೋ ಅಥವಾ ವಿಚಾರಣೆಯಾಗಬೇಕೋ?

ಆರೋಪಿಯ ಉತ್ತರಃ

(ಆರೋಪಿಗೆ ದಿನಾಂಕ 10.03.2024 ರಂದು ಆಪಾದನೆಯ ಸಾರಾಂಶವನ್ನು ಅವರಿಗೆ ತಿಳಿಯುವ ಭಾಷೆಯಲ್ಲಿ ಓದಿ, ಅವರ ಹೇಳಿಕೆಯನ್ನು ನನ್ನ ಸಮಕ್ಷಮದಲ್ಲಿ ಬರೆದುಕೊಳ್ಳಲಾಯಿತು. ಅದು ಸತ್ಯವಾಗಿಯೂ ಮತ್ತು ಸರಿಯಾಗಿಯೂ ಇರುತ್ತದೆ ಅಂತಾ ಪ್ರಮಾಣೀಕರಿಸುತ್ತೇನೆ)

ಸಹಿ/-

ಮೂಡಿಗೆರೆ
ದಿನಾಂಕಃ 10.03.2024.

ಪ್ರಧಾನ ಸಿವಿಲ್ ನ್ಯಾಯಾಧೀಶರು
ಮತ್ತು ಜೆ.ಎಂ.ಎಫ್.ಸಿ, ಮೂಡಿಗೆರೆ.